**ಕರ್ನಾಟಕ ಸರ್ಕಾರ**

**ತೋಟಗಾರಿಕೆ ಇಲಾಖೆ**

ಸಂಖ್ಯೆ:ತೋಇ:ಸತೋನಿ:ಲಾತಕೇ:ಸತೋಅ:12:2018-19

ಸಹಾಯಕ ತೋಟಗಾರಿಕೆ ನಿರ್ದೇಶಕರ ಕಛೇರಿ,
ತರಬೇತಿ ಕೇಂದ್ರ, ಲಾಲ್ ಬಾಗ್,
ಬೆಂಗಳೂರು,ದಿನಾಂಕ:21-12-2018.

**ಪ್ರಕಟಣೆ**

**2018-19 ನೇ ಸಾಲಿನಲ್ಲಿ ತೋಟಗಾರಿಕೆ ಇಲಾಖೆಯಲ್ಲಿ ಕೌಶಲ್ಯ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ 6 ದಿನಗಳ ಜೇನು ಸಾಕಾಣಿಕೆ/ಅಣಬೆ ಬೇಸಾಯ/ಜೈವಿಕ ಗೊಬ್ಬರಗಳ ಉತ್ಪಾದನೆ ಬಗ್ಗೆ ತರಬೇತಿಗೆ ಅರ್ಜಿ ಆಹ್ವಾನಿಸುವ ಬಗ್ಗೆ**

*************

2018-19 ನೇ ಸಾಲಿನಲ್ಲಿ ದಿನಾಂಕ:03-01-2019 ರಿಂದ 09-01-2019 ರವರೆಗೆ ತೋಟಗಾರಿಕೆ ತರಬೇತಿ ಕೇಂದ್ರ, ಲಾಲ್ ಬಾಗ್, ಬೆಂಗಳೂರು ಇಲ್ಲಿ ನಡೆಯುವ **6 (ಆರು) ದಿನಗಳ ಅವಧಿಯ ಜೇನು ಸಾಕಾಣಿಕೆ/ಅಣಬೆ ಬೇಸಾಯ/ಜೈವಿಕ ಗೊಬ್ಬರಗಳ ಉತ್ಪಾದನೆ ತರಬೇತಿಗೆ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.**

- **ವಿದ್ಯಾರ್ಹತೆ:** ತರಬೇತಿಗೆ ಆಯ್ಕೆಯಾಗಲು ಅಭ್ಯರ್ಥಿಯು ಕನಿಷ್ಠ 5 ನೇ ತರಗತಿ ತೇರ್ಗಡೆಯಾಗಿರಬೇಕು ಕನ್ನಡ ಓದುವುದು, ಬರೆಯುವುದು ಮತ್ತು ಮಾತನಾಡುವುದು ತಿಳಿದಿರಬೇಕು.
- **ವಯೋಮಿತಿ:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 35 ವರ್ಷ ಮತ್ತು ಇತರರಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷ.
- ಕೌಶಲ್ಯ ಅಭಿವೃದ್ಧಿ, ಉದ್ಯಮ ಶೀಲತೆ ಮತ್ತು ಜೀವನೋಪಾಯ ಇಲಾಖೆ ರವರ ಅಧಿಕೃತ ವೆಬ್ ಸೈಟ್ ನಲ್ಲಿ ತೋಟಗಾರಿಕೆ ತರಬೇತಿಗಾಗಿ ದಾಖಲಿಸಿರುವ ಅಭ್ಯರ್ಥಿಗಳಿಗೆ ಮತ್ತು ರೈತ ಮಕ್ಕಳಿಗೆ ಆದ್ಯತೆ ನೀಡಲಾಗುವುದು.
- ಅಭ್ಯರ್ಥಿಗಳನ್ನು ಜೇಷ್ಠತೆ ಆಧಾರದ ಮೇಲೆ ತರಬೇತಿ ಪ್ರವೇಶವನ್ನು ನೀಡಲಾಗುವುದು.
- ಅರ್ಜಿಗಳನ್ನು ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ ಲಾಲ್ ಬಾಗ್, ಬೆಂಗಳೂರು ಅಥವಾ ಇಲಾಖಾ ವೆಬ್ ಸೈಟ್ www.horticulture.kar.nic.in ನಲ್ಲಿ ದಿನಾಂಕ: 24-12-2018 ರಿಂದ 01-01-2019 ರವರೆಗೆ ಪಡೆಯಬಹುದಾಗಿರುತ್ತದೆ.
- ಅಭ್ಯರ್ಥಿಗಳ ಅರ್ಜಿಗಳ ಪರಿಶೀಲನೆ ಮತ್ತು ಆಯ್ಕೆ ಪಟ್ಟಿ ಪ್ರಕಟಿಸುವ ದಿನಾಂಕ:02-01-2019.
- ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಿಸಿದ ದಾಖಲಾತಿಗಳೊಂದಿಗೆ ದಿನಾಂಕ:01-01-2019 ರಂದು ಸಂಜೆ 5.30 ಗಂಟೆಯೊಳಗೆ ಸಹಾಯಕ ತೋಟಗಾರಿಕೆ ನಿರ್ದೇಶಕರು, ತರಬೇತಿ ಕೇಂದ್ರ ಲಾಲ್ ಬಾಗ್, ಬೆಂಗಳೂರು ರವರ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 080-26564538, 9480464224 ಮತ್ತು 9845549545 ಗಳನ್ನು ಸಂಪರ್ಕಿಸಬಹುದು .

Y. C. Chandra Shekar

ಸಹಾಯಕ ತೋಟಗಾರಿಕೆ ನಿರ್ದೇಶಕರು,
ತರಬೇತಿ ಕೇಂದ್ರ ಲಾಲ್ ಬಾಗ್.